## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **611 (740)**
ಸದಸ್ಯರ ಹೆಸರು : ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 11.12.2023
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರವು ಸರ್ಕಾರಿ ಶಾಲೆ ಮತ್ತು ಕಾಲೇಜುಗಳ ಶಿಕ್ಷಕರು ಹಾಗೂ ಉಪನ್ಯಾಸಕರುಗಳಿಗೆ ಮತ್ತು ನೌಕರರಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) | ಈ ಜ್ಯೋತಿ ಸಂಜೀವಿನಿ ಯೋಜನೆಯನ್ನು ಅನುದಾನಿತ ಖಾಸಗಿ ಪ್ರೌಢ ಶಾಲಾ ಶಿಕ್ಷಕರುಗಳಿಗೆ ಮತ್ತು ಖಾಸಗಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ ಹಾಗೂ ನೌಕರರಿಗೆ ಸದರಿ ಯೋಜನೆಯನ್ನು ನೀಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ ? | ಸರ್ಕಾರಿ ನೌಕರರಿಗೆ ಚಿಕಿತ್ಸೆ ಪಡೆದ ನಂತರ ವೈದ್ಯಕೀಯ ವೆಚ್ಚದ ಸದರಿ ಮೊತ್ತವನ್ನು ನಿಯಮಾನುಸಾರ ಪರಿಶೀಲಿಸಿ ಹಿಂಬರಿಸಲಾಗುತ್ತಿತ್ತು. ಪ್ರಸ್ತುತ ಜ್ಯೋತಿ ಸಂಜೀವಿನಿ ಯೋಜನೆಯಡಿ ನಗದು ರಹಿತ ಚಿಕಿತ್ಸೆಯನ್ನು ನೀಡಲಾಗುತ್ತಿದೆ. ಆದರೆ ಖಾಸಗಿ ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ-1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (Classification, Regulation and Prescription of Curricula) ನಿಯಮಗಳು-1955ರ ವ್ಯಾಪ್ತಿಗೆ ಒಳಪಡುತ್ತಾರೆ ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ.<br><br>ಮುಂದುವರೆದು, ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರ ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ-ii(3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ. ಆದುದರಿಂದ, ಖಾಸಗಿ ಅನುದಾನಿತ ಸಿಬ್ಬಂದಿಗಳು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಒಳಪಡುವುದಿಲ್ಲ. |

ಇಪಿ 544 ಎಸ್ಇಎಸ್ 2023

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು